## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಾವೇರಿ ಜಿಲ್ಲೆಯ ರಟ್ಟೀಹಳ್ಳಿ ತಾಲ್ಲೂಕಿನ ಬುಳ್ಳಾಪುರ-ಹಾಡೆ ಮತ್ತು ಇತರೆ 07 ಕೆರೆಗಳನ್ನು ಭೈರನಪಾದ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಬುಳ್ಳಾಪುರ-ಹಾಡೆ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.24.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ: 1.ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿ/ಬುಳ್ಳಾಪುರ-ಹಾಡೆ ಡಿಪಿಆರ್/2019-20/2139 ದಿನಾಂಕ: 22.07.2019.

2.ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿ/ಬುಳ್ಳಾಪುರ-ಹಾಡೆ ಡಿಪಿಆರ್/2019-20/6962 ದಿನಾಂಕ: 12.02.2021 ಹಾಗೂ 1004 ದಿನಾಂಕ:23.06.2021.

****

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2)ರ ಪತ್ರಗಳಲ್ಲಿ, ಹಾವೇರಿ ಜಿಲ್ಲೆಯ ರಟ್ಟೀಹಳ್ಳಿ ತಾಲ್ಲೂಕಿನ ಬುಳ್ಳಾಪುರ-ಹಾಡೆ ಮತ್ತು ಇತರೆ 07 ಕೆರೆಗಳನ್ನು ಭೈರನಪಾದ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸಿ ಜನ-ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸಲು ಹಾಗೂ ಅಂತರ್ಜಲ ಮಟ್ಟ ವೃದ್ದಿಸಲು ಈ ಯೋಜನೆಯನ್ನು ಶೀಘ್ರವಾಗಿ ಕೈಗೆತ್ತಿಕೊಳ್ಳುವಂತೆ ಸ್ಥಳೀಯ ಜನಪ್ರತಿನಿಧಿಗಳು ಒತ್ತಾಯಿಸುತ್ತಿರುವುದರಿಂದ ಸದರಿ ಯೋಜನೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಮುಂದುವರೆದು, ಪ್ರಸ್ತಾವನೆಯನ್ನು ದಿನಾಂಕ:20.06.2019 ರಂದು ಜರುಗಿದ ನಿಗಮದ 57ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಸದರಿ ಯೋಜನಾ ವರದಿಯನ್ನು ಮಂಡಿಸಲಾಗಿ, ಸಮಿತಿಯು ತುಂಗಭದ್ರಾ ನದಿಯಿಂದ ಯೋಜನೆಗೆ ಅವಶ್ಯವಿರುವ 0.045 ಟಿ.ಎಂ.ಸಿ ನೀರನ್ನು ಬಳಸಿ, ಸದರಿ ಗ್ರಾಮಗಳ ಜನ-ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸುವ ಮತ್ತು ಅಂತರ್ಜಲ ಮಟ್ಟ ವೃದ್ದಿಸುವ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ. ಅದರನ್ವಯ, ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:09.07.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 88ನೇ ಸಭೆಯಲ್ಲಿ ಮಂಡಿಸಲಾಗಿ, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಅದರಂತೆ, ಹಾವೇರಿ ಜಿಲ್ಲೆಯ ರಟ್ಟೀಹಳ್ಳಿ ತಾಲ್ಲೂಕಿನ ಬುಳ್ಳಾಪುರ-ಹಾಡೆ ಮತ್ತು ಇತರೆ 07 ಕೆರೆಗಳನ್ನು ಭೈರನಪಾದ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಬುಳ್ಳಾಪುರ-ಹಾಡೆ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.24.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 03 ಎಂಎಂಬಿ 2019, ಬೆಂಗಳೂರು,**
**ದಿನಾಂಕ: 02.08.2021**

ಹಾವೇರಿ ಜಿಲ್ಲೆಯ ರಟ್ಟೆಹಳ್ಳಿ ತಾಲ್ಲೂಕಿನ ಬುಳ್ಳಾಪುರ-ಹಾಡೆ ಮತ್ತು ಇತರೆ 07 ಕೆರೆಗಳನ್ನು ಭೈರನಪಾದ ಗ್ರಾಮದ ಹತ್ತಿರ ತುಂಗಭದ್ರಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಬುಳ್ಳಾಪುರ-ಹಾಡೆ ಯೋಜನೆಯ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಿರುವ ರೂ.24.00ಕೋಟಿಗಳ (ಇಪ್ಪತ್ತನಾಲ್ಕು ಕೋಟಿ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 155 ಆಕೋ-1/2021 ದಿನಾಂಕ:20.07.2021 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿಎಸ್ 10 ಎಂಸಿಎಂ 2019-ಪಿಪಿಡಿ-ಪಿಡಿ ದಿನಾಂಕ:05.09.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಶ್ರೀಹರಿ ಎಸ್.ಆರ್.)**
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಉಪಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ) ವಿಧಾನಸೌಧ. (ಸಚಿವ ಸಂಪುಟ ಪ್ರಕರಣ ಸಂಖ್ಯೆ:ಸಿ 305/2021 ದಿನಾಂಕ: 22.07.2021 ರ ಮೇರೆಗೆ)
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜಲಸಂಪನ್ಮೂಲ ಇಲಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜಲ ಸಂಪನ್ಮೂಲ ಇಲಾಖೆ.
14. ತಾಂತ್ರಿಕ ಸಹಾಯಕರು, (ತಾಂತ್ರಿಕ-6) ಜಲ ಸಂಪನ್ಮೂಲ ಇಲಾಖೆ.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.